**Akashvani : Bangalore**
**Regional Bulletin In Kannada**
**29.06.2026 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**29.06.2026 / 14.30 hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

**೧. ಪೆರು ದೇಶದೊಂದಿಗೆ ರಾಜ್ಯ ಸರ್ಕಾರ ’ಸಿಸ್ಟರ್ ಸಿಟಿ’ ಒಪ್ಪಂದ- ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್**

**೨. ಚನ್ನಪಟ್ಟಣದಲ್ಲಿ ರೈಲ್ವೆ ರಸ್ತೆ ಮೇಲ್ಸೇತುವೆ ಉದ್ಘಾಟಿಸಿದ ಕೇಂದ್ರ ಸಚಿವ ವಿ.ಸೋಮಣ್ಣ; ’ವಂದೇ ಭಾರತ್ ರೈಲು’ಗಳ ಸಂಖ್ಯೆ ಹೆಚ್ಚಿಸುವಂತೆ ಸಚಿವ ಎಂ.ಬಿ.ಪಾಟೀಲ್ ಮನವಿ**

**೩. ನಾಳೆಯಿಂದ ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ- ಸರ್ಕಾರದ ಆಕ್ಷೇಪಕ್ಕೆ ಚುನಾವಣಾ ಆಯೋಗ ಉತ್ತರ ನೀಡಿಲ್ಲ- ಗೃಹ ಸಚಿವ ಪ್ರಿಯಾಂಕ್ ಖರ್ಗೆ**

**೪. ರಾಜ್ಯಸಭಾ ಸದಸ್ಯರಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರಮಾಣ ವಚನ ಸ್ವೀಕಾರ**

**೫. ರಾಜ್ಯದಲ್ಲಿ ಬರದ ಭೀತಿಯ ನಡುವೆ ತಮಿಳುನಾಡಿಗೆ ಪ್ರತಿ ದಿನ ೨ ಸಾವಿರ ಕ್ಯೂಸೆಕ್ ನೀರು ಬಿಡುಗಡೆ - ಬಿಜೆಪಿ ಆರೋಪ**

**<><*<><>*><>**

ಪೆರು ದೇಶದೊಂದಿಗೆ ಹತ್ತು ಬಿಲಿಯನ್ ಡಾಲರ್ ದ್ವಿಪಕ್ಷೀಯ ವ್ಯಾಪಾರ ವೃದ್ಧಿಗೆ ಐತಿಹಾಸಿಕ ’ಸಿಸ್ಟರ್ ಸಿಟಿ’ ಒಪ್ಪಂದ ಮಾಡಿಕೊಳ್ಳಲು ರಾಜ್ಯ ಸರ್ಕಾರ ಅತ್ಯಂತ ಉತ್ಸುಕವಾಗಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಬೆಂಗಳೂರಿನಲ್ಲಿ ತಿಳಿಸಿದ್ದಾರೆ. ಭಾರತ ಮತ್ತು ಪೆರು ನಡುವಿನ ೬೩ ವರ್ಷಗಳ ರಾಜತಾಂತ್ರಿಕ ಬಾಂಧವ್ಯ ಹಾಗೂ ಪೆರು ಗಣರಾಜ್ಯದ ೨೦೫ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಆಯೋಜಿಸಲಾಗಿದ್ದ ಉನ್ನತಮಟ್ಟದ ರಾಜತಾಂತ್ರಿಕ ಸಮಾರಂಭದಲ್ಲಿ ಅವರು ಮಾತನಾಡಿದರು. ಭಾರತದ ಐಟಿ ಸಾಫ್ಟವೇರ್ ಅಭಿವೃದ್ಧಿ ಮತ್ತು ಜೈವಿಕ ತಂತ್ರಜ್ಞಾನ ಉತ್ಪಾದನೆಯಲ್ಲಿ ರಾಜ್ಯವು ಶೇಕಡಾ ೪೦ ಕ್ಕಿಂತ ಹೆಚ್ಚಿನ ಪಾಲನ್ನು ಹೊಂದುವ ಮೂಲಕ ದೇಶದಲ್ಲೇ ಪ್ರಥಮ ಸ್ಥಾನದಲ್ಲಿದೆ ಎಂದು ಸಂತಸ ವ್ಯಕ್ತಪಡಿಸಿದರು. ಬೆಂಗಳೂರು ಮತ್ತು ಪೆರು ದೇಶದ ಪ್ರಮುಖ ನಗರದ ನಡುವೆ ವ್ಯಾಪಾರ, ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ನೇರ ಸಾಂಸ್ಥಿಕ ಸಹಯೋಗ ಹೆಚ್ಚಿಸುವ ನಿಟ್ಟಿನಲ್ಲಿ ಈ ಸಿಸ್ಟರ್ ಸಿಟಿ ಒಪ್ಪಂದವು ಅತ್ಯಂತ ಮಹತ್ವದ್ದಾಗಿದೆ ಎಂದು ತಿಳಿಸಿದರು. ಇದು ಭವಿಷ್ಯದಲ್ಲಿ ಉಭಯ ದೇಶಗಳ ನಡುವಿನ ಹತ್ತು ಬಿಲಿಯನ್ ಡಾಲರ್ ದ್ವಿಪಕ್ಷೀಯ ವ್ಯಾಪಾರ ವೃದ್ಧಿಗೆ ಮುನ್ನುಡಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ನಡೆಯುತ್ತಿರುವ ರೈಲ್ವೇ ಯೋಜನೆಗಳಿಗೆ ಕೇಂದ್ರ ಸರ್ಕಾರ ಸಂಪೂರ್ಣ ಸಹಕಾರ ನೀಡುತ್ತಿದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಚನ್ನಪಟ್ಟಣದ ಎಲೆಕೇರಿ ಸಮೀಪ ಲೆವೆಲ್ ಕ್ರಾಸಿಂಗ್ ಬದಲಿಗೆ ರಸ್ತೆ ಮೇಲ್ಸೇತುವೆ ಉದ್ಘಾಟಿಸಿ ಮಾತನಾಡಿದ ಅವರು, ಬೆಂಗಳೂರು ಸುತ್ತಮುತ್ತ ೧೪೦ ಕ್ಕೂ ಹೆಚ್ಚು ಮೇಲ್ಸೇತುವೆ ನಿರ್ಮಾಣಕ್ಕೆ ಈಗಾಗಲೆ ಚಾಲನೆ ನೀಡಲಾಗಿದ್ದು ಸುಮಾರು ೪೭ ಲೆವೆಲ್ ಕ್ರಾಸಿಂಗ್ ಸ್ಥಳದಲ್ಲಿ ಮೇಲ್ಸೇತುವೆ ನಿರ್ಮಿಸಲಾಗಿದೆ ಎಂದು ಹೇಳಿದ್ದಾರೆ.

**ಧ್ವನಿ: ವಿ.ಸೋಮಣ್ಣ ( ೩೧  ಸೆಕೆಂಡ್ಸ್)**

ರಾಜ್ಯದ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಮಾತನಾಡಿ, ಬೆಂಗಳೂರು ಸುತ್ತಮುತ್ತಲ ನೂರು ಕಿಲೋಮೀಟರ್ ವ್ಯಾಪ್ತಿಯಲ್ಲಿನ ರೈಲು ಸಂಪರ್ಕವನ್ನು ನಾಲ್ಕು ಪಥಗಳಿಗೆ ಮೇಲ್ದರ್ಜೆಗೇರಿಸಿದ್ದಲ್ಲಿ, ಸ್ಯಾಟಲೈಟ್ ನಗರಗಳ ಅಭಿವೃದ್ಧಿಗೆ ಹೆಚ್ಚು ಅನುಕೂಲವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಈಗಿರುವ ವಂದೆ ಭಾರತ್ ರೈಲುಗಳ ಸಂಖ್ಯೆ ಹೆಚ್ಚಳ ಮಾಡಬೇಕು ಹಾಗೂ ಬೆಂಗಳೂರು ಮತ್ತು ಚೆನ್ನೈ ನಡುವಿನ ಸೂಪರ್ ಸ್ಪೀಡ್ ಹಳಿಯನ್ನು ಮೈಸೂರಿನವರೆಗೆ ವಿಸ್ತರಣೆ ಮಾಡಬೇಕು ಎಂದು ಮನವಿ ಮಾಡಿದರು. ಇದೇ ವೇಳೆ, ಇನ್ನು ಎರಡು ಸ್ಥಳಗಳಲ್ಲಿ ಮೇಲ್ಸೇತುವೆ ಮಾಡುವಂತೆ ರೈಲ್ವೆ ಸಚಿವರಿಗೆ ಶಾಸಕ ಸಿ.ಪಿ.ಯೋಗೇಶ್ವರ್ ಮನವಿ ಮಾಡಿದರು.

**<><*<><>*><>**

ನಾಳೆಯಿಂದ ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-ಎಸ್‌ಐಆರ್ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಸಹಕರಿಸುವಂತೆ ಚುನಾವಣಾ ಆಯೋಗ ಮನವಿ ಮಾಡಿದೆ. ಬೂತ್‌ಮಟ್ಟದ ಅಧಿಕಾರಿಗಳು ಮನೆಮನೆಗೆ ಭೇಟಿ ನೀಡಿ, ಮತದಾರರ ಮಾಹಿತಿ ಪರಿಶೀಲನೆ ಹಾಗೂ ನವೀಕರಣ ಕಾರ್ಯವನ್ನು ನಡೆಸಲಿದ್ದಾರೆ. ಮತದಾರರ ಪಟ್ಟಿಯ ಡೀಪ್ ಕ್ಲೀನಿಂಗ್ ಮತ್ತು ನಕಲಿ ಮತದಾರರನ್ನು ಪಟ್ಟಿಯಿಂದ ಕೈಬಿಡುವುದು ಪ್ರಮುಖ ಉದ್ದೇಶವಾಗಿದೆ. ನಾಳೆಯಿಂದ ಜುಲೈ ೨೯ರವರೆಗೆ ಮನೆಮನೆ ಸಮೀಕ್ಷೆ, ಆಗಸ್ಟ್ ೫ ರಂದು ಕರಡು ಮತದಾರರ ಪಟ್ಟಿ ಆಯೋಗ ಪ್ರಕಟಿಸಲಿದೆ. ಆಗಸ್ಟ್ ೫ ರಿಂದ ಸೆಪ್ಟಂಬರ್ ೪ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳ ಸಲ್ಲಿಕೆಗೆ ಅವಕಾಶ ನೀಡಲಾಗಿದೆ. ಅಕ್ಟೋಬರ್ ೭ ರಂದು ಆಯೋಗ ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಿದೆ.

**<><*<><>*><>**

ರಾಜ್ಯದಲ್ಲಿ ನಡೆಯುತ್ತಿರುವ ಎಸ್‌ಐಆರ್ ಬಗ್ಗೆ ಈಗಾಗಲೇ ಕೇಂದ್ರ ಚುನಾವಣಾ ಆಯೋಗಕ್ಕೆ ಸರ್ಕಾರ ೮ ರಿಂದ ೧೦ ಆಕ್ಷೇಪಣೆಗಳನ್ನು ಸಲ್ಲಿಸಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ಆಕ್ಷೇಪಕ್ಕೆ ಆಯೋಗ ಇನ್ನು ಉತ್ತರ ನೀಡಿಲ್ಲ ಎಂದು ಹೇಳಿದ್ದಾರೆ. ಗೊಂದಲಗಳಿದ್ದರೆ, ನ್ಯಾಯಮಂಡಳಿಯಲ್ಲಿ ಪ್ರಶ್ನಿಸಲು ಅವಕಾಶ ಮಾಡಿಕೊಡಬೇಕು. ದಾಖಲೆಗಳಲ್ಲಿ ಅಕ್ಷರಗಳು ತಪ್ಪಾದ ಮಾತ್ರಕ್ಕೆ ಮತದಾರರ ಹಕ್ಕು ಕಿತ್ತುಕೊಳ್ಳಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ, ಬಿಡದಿ ಟೌನ್‌ಶಿಪ್ ವಿಚಾರ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಭೂಮಿ ಕೊಡಿ ಎಂದು ಯಾವ ರೈತರಿಗೂ ಬಲವಂತ ಮಾಡುವಂತಿಲ್ಲ. ಯಾರು ಸ್ವಇಚ್ಛೆಯಿಂದ ಭೂಮಿ ಕೊಡುತ್ತಾರೊ ಅದನ್ನು ಪರಿಗಣಿಸಲಾಗುವುದು ಎಂದು ಹೇಳಿದ್ದಾರೆ.

**<><*<><>*><>**

ರಾಜ್ಯಸಭಾ ಸದಸ್ಯರಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನವದೆಹಲಿಯಲ್ಲಿ ಇಂದು ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಪ್ರತಿಜ್ಞಾವಿಧಿ ಬೋಧಿಸಿದರು. ಸಂವಿಧಾನದ ಪ್ರತಿ ಹಿಡಿದು ಮಲ್ಲಿಕಾರ್ಜುನ ಖರ್ಗೆ ಅವರು ಹಿಂದಿ ಭಾಷೆಯಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಈ ವೇಳೆ, ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾ ಗಾಂಧಿ, ಸಂಸದೆ ಪ್ರಿಯಾಂಕಾ ವಾದ್ರಾ, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

**<><*<><>*><>**

ರಾಜ್ಯದಲ್ಲಿ ಮುಂಗಾರು ಕ್ಷೀಣಿಸಿದ್ದು, ಬರದ ಭೀತಿ ಆವರಿಸಿದೆ. ರಾಜಧಾನಿ ಬೆಂಗಳೂರಿನಲ್ಲಿ ಜನ ಕುಡಿಯುವ ನೀರಿಗೂ ಪರದಾಡುವ ಭೀಕರ ಪರಿಸ್ಥಿತಿ ಎದುರಾಗಿದೆ. ಆದರೆ ರಾಜ್ಯ ಸರ್ಕಾರ ಕದ್ದುಮುಚ್ಚಿ ತಮಿಳುನಾಡಿಗೆ ಕಾವೇರಿ ನೀಡು ಬಿಡುಗಡೆ ಮಾಡುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಕಳೆದ ಮೂರು ದಿನಗಳಿಂದ ಪ್ರತಿದಿನ ೨ ಸಾವಿರ ಕ್ಯೂಸೆಕ್ ನೀರನ್ನು ತಮಿಳುನಾಡಿಗೆ ಹರಿಸಲಾಗುತ್ತಿದೆ ಎಂದು ದೂರಿದ್ದಾರೆ. ಹೈಕಮಾಂಡ್ ಅಣತಿಯಂತೆ ರಾಜ್ಯ ಸರ್ಕಾರ, ನಾಡಿನ ಜನತೆಯ ಹಿತಕಾಯದೆ, ತಮಿಳುನಾಡಿನ ಜೊತೆ ರಾಜಿಮಾಡಿಕೊಳ್ಳುವುದು ಎಷ್ಟು ಸರಿ ಎಂದು ಆರ್.ಅಶೋಕ ಪ್ರಶ್ನಿಸಿದ್ದಾರೆ.

**<><*<><>*><>**

ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರನ್ನು ಕರ್ನಾಟಕ ಒಲಿಂಪಿಕ್ ಸಂಸ್ಥೆಯ ಪದಾಧಿಕಾರಿಗಳ ನಿಯೋಗ, ಇಂದು ವಿಧಾನಸೌಧದ ಕಾರ್ಯಾಲಯದಲ್ಲಿ ಸೌಹಾರ್ದಯುತವಾಗಿ ಭೇಟಿ ಮಾಡಿತು. ಈ ಸಂದರ್ಭದಲ್ಲಿ ರಾಜ್ಯದಲ್ಲಿ ಕ್ರೀಡಾಭಿವೃದ್ಧಿ, ಯುವ ಪ್ರತಿಭೆಗಳಿಗೆ ಹೆಚ್ಚಿನ ಅವಕಾಶಗಳ ಸೃಷ್ಟಿ, ಕ್ರೀಡಾ ಮೂಲಸೌಕರ್ಯಗಳ ಬಲವರ್ಧನೆ ಹಾಗೂ ಒಲಿಂಪಿಕ್ ಕ್ರೀಡೆಗಳ ಉತ್ತೇಜನಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಸುದೀರ್ಘವಾಗಿ ಚರ್ಚೆ ನಡೆಯಿತು. ರಾಜ್ಯದ ಕ್ರೀಡಾ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಅಗತ್ಯ ಸಹಕಾರ ಹಾಗೂ ಬೆಂಬಲ ನೀಡುವುದಾಗಿ ಡಾ.ಜಿ.ಪರಮೇಶ್ವರ್ ಭರವಸೆ ನೀಡಿದರು.

**<><*<><>*><>**

ಚಾಮರಾಜನಗರ ಜಿಲ್ಲಾ ನ್ಯಾಯಾಲಯಕ್ಕೆ ಮೂರನೇ ಬಾರಿ ಹುಸಿ ಬಾಂಬ್ ಬೆದರಿಕೆ ಇ-ಮೇಲ್ ಸಂದೇಶವನ್ನು ಕಳುಹಿಸಲಾಗಿದೆ ಇದರಿಂದ ವಕೀಲರು ಹಾಗೂ ಸಾರ್ವಜನಿಕರು ಕೆಲಕಾಲ ಆತಂಕಗೊಂಡಿದ್ದರು. ಅಂಬುನಾಥನ್ ಅರಿಯಪ್ಪನ್ ಎಂಬಾತನ ಹೆಸರಿನಲ್ಲಿ ಇ-ಮೇಲ್ ಕಳುಹಿಸಲಾಗಿತ್ತು. ಇದೊಂದು ಹುಸಿ ಸಂದೇಶ ಎಂದು ಪೊಲೀಸರು ದೃಢಪಡಿಸಿದ ಬಳಿಕ ನ್ಯಾಯಾಲಯದ ಕಲಾಪ ಆರಂಭಗೊಂಡಿತು.

**<><*<><>*><>**

ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್ ರಾಷ್ಟ್ರೀಯ ಹೆದ್ದಾರಿಯಲ್ಲಿ ೯೬ ಕಿಲೋಮೀಟರ್  ಮಾರ್ಗ ವಾಹನ ಸಂಚಾರಕ್ಕೆ ಮುಕ್ತವಾಗಿದೆ. ಇದರಲ್ಲಿ ೭೧ ಕಿಲೋಮೀಟರ್  ಬೇತಮಂಗಲದಿಂದ ಆಂಧ್ರಪ್ರದೇಶದ ಬೈರೆಡ್ಡಿಪಲ್ಲಿ ನಡುವಿನ ೨೫ ಕಿಲೋಮೀಟರ್ ಮಾರ್ಗವನ್ನು ಇತ್ತೀಚೆಗೆ ಲೋಕಾರ್ಪಣೆ ಮಾಡಲಾಗಿದೆ. ಇದರಿಂದ ಚಿತ್ತೂರು, ತಿರುಪತಿ ಮತ್ತು

ಚೆನ್ನೈ ಸಂಪರ್ಕ ಇನ್ನಷ್ಟು ಸುಗಮವಾಗಿದೆ. ಎನ್.ಜಿ ಹುಲ್ಲೂರ್, ಸುಂದರಪಾಳ್ಯ, ಹೆಡಗಿನಬೆಲೆ, ಬೇತಮಂಗಲ ಬಳಿ ಎಕ್ಸ್‌ಪ್ರೆಸ್‌ವೇಗೆ ಪ್ರವೇಶ ಮತ್ತು ನಿರ್ಗಮನಕ್ಕೆ ರಸ್ತೆಗಳನ್ನು ನಿರ್ಮಿಸಲಾಗಿದೆ.

**<><*<><>*><>**

**ಇನ್ನು ಸಂಕ್ಷಿಪ್ತ ಸುದ್ದಿಗಳು...**

೧. ದಾವಣಗೆರೆಯಲ್ಲಿ ಪ್ರಸಕ್ತ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ, ವಿವಿಧ ಮುಂಗಾರು ಬೆಳೆಗಳ ವಿಮೆ ನೋಂದಣಿ ಪ್ರಕ್ರಿಯೆ ಚುರುಕಿನಿಂದ ನಡೆಯುತ್ತಿದೆ. ನೋಂದಣಿ ಮಾಡಿಸಲು ಜುಲೈ ೩೧ ಕೊನೆಯ ದಿನವಾಗಿದೆ ಎಂದು ತಾಲೂಕು ಸಹಾಯಕ ಕೃಷಿ ನಿರ್ದೇಶಕರಾದ ಶ್ರೀಧರಮೂರ್ತಿ.ಡಿ.ಎಂ ತಿಳಿಸಿದ್ದಾರೆ.

೨. ಹಾವೇರಿ ಜಿಲ್ಲೆಯಲ್ಲಿ ಪೋಲಿಯೊ ಲಸಿಕಾ ಕಾರ್ಯಕ್ರಮ ಯಶಸ್ವಿಯಾಗಿ ನಡೆದಿದ್ದು, ಶೇಕಡಾ ೯೫.೧೫ ಗುರಿ ಸಾಧಿಸಲಾಗಿದೆ ಎಂದು ಮಕ್ಕಳ ಆರೋಗ್ಯ ಅಧಿಕಾರಿ ಡಾ.ಎಂ.ಜಯಾನಂದ ಮಾಹಿತಿ ನೀಡಿದ್ದಾರೆ.

೩. ಬಾಗಲಕೋಟೆ ನವನಗರದ ಯುನಿಟ್-೨ರಲ್ಲಿ ೧೦ ಎಕರೆ ಪ್ರದೇಶದಲ್ಲಿ ನಿರ್ಮಿಸಲಾಗಿರುವ ಬೃಹತ್ ಉದ್ಯಾನವನವನ್ನು ಶಾಸಕ ಉಮೇಶ ಮೇಟಿ ನಿನ್ನೆ ಲೋಕಾರ್ಪಣೆಗೊಳಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**